ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್ ಯೋಜನೆಗಳು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):-

603(811) ಮಾನ್ಯ ಮತ್ತು ಆರೋಗ್ಯ ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಮಿಷನ್ ಸೇರಿದಂತೆ ಕೇಂದ್ರ ಸರ್ಕಾರದ ಯಾವ್ಯಾವ ಯೋಜನೆಯಡಿ ರಾಜ್ಯಕ್ಕೆ ಎಷ್ಟು ಅನುದಾನ ಬಿಡುಗಡೆಯಾಗಿದೆ; (ಯೋಜನೆಗಳ ಸಹಿತ ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ತುಮಕೂರು ಜಿಲ್ಲೆಗೆ ಈ ಯೋಜನೆಗಳಡಿಯಲ್ಲಿ ನೀಡಿರುವ ಅನುದಾನ ಎಷ್ಟು; (ತಾಲ್ಲೂಕುವಾರು ವಿವರಗಳನ್ನು ಯೋಜನೆಗಳ ಸಹಿತ ನೀಡುವುದು)

(ಇ) National Rural Health Mission (NRHM) ಯೋಜನೆಯಡಿ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಇತರೆ ಆಸ್ಪತ್ರೆಗಳ ದುರಸ್ಥಿಗೆ ಹಣ ಮೀಸಲಿರಿಸಲಾಗಿದೆಯೇ;

(ಈ) NRHM ಯೋಜನೆಯಡಿ ಅನುಷ್ಠಾನಗೊಳಿಸಿದ ಯೋಜನೆಗಳಿಗೆ ಖರ್ಚು ಮಾಡಿದ ಮೊತ್ತವೆಷ್ಟು; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಉ) ತುಮಕೂರು ಜಿಲ್ಲೆ, ಶಿರಾ ತಾಲ್ಲೂಕು, ಪಟ್ಟನಾಯಕನ ಹಳ್ಳಿಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ (NRHM) ಯೋಜನೆಯಡಿಯಲ್ಲಿ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುವುದೇ; ಇಲ್ಲದಿದ್ದಲ್ಲಿ, ಯಾವ ಯೋಜನೆಯಡಿ ಈ ಆರೋಗ್ಯ ಕೇಂದ್ರವನ್ನು ಉನ್ನತೀಕರಿಸಲಾಗುವುದು?